**ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ., ರವರ ನ್ಯಾಯಾಲಯ, ಹಿರಿಯೂರು.**

**ಸಿ.ಸಿ ಸಂಖ್ಯೆಃ 1087/2021**

| | | | |
|---|---|---|---|
| ಸಾಕ್ಷಿದಾರರ ಹೆಸರು | - | ರಾಘವೇಂದ್ರ ಕೆ ಆರ್ | ಸಿಡಬ್ಲ್ಯೂ-35 |
| ತಂದೆಯ/ಗಂಡನ ಹೆಸರು | - | ರುದ್ರಪ್ಪ | ಪಿಡಬ್ಲ್ಯೂ-4 |
| ವಯಸ್ಸು | - | ಸು. 44 ವರ್ಷ | ಪ್ರ.ವ.ಬೋ<br>ದಿನಾಂಕಃ08.07.2024 |
| ಉದ್ಯೋಗ | - | ಸಿ ಪಿ ಐ ಶಿರಾ ಗ್ರಾಮಾಂತರ ವೃತ್ತ | |
| ವಾಸ | - | ಶಿರಾ | |

**ಮುಖ್ಯ ವಿಚಾರಣೆಃ ಮಾನ್ಯ ಎಪಿಪಿ ಯವರಿಂದಃ-**

ನಾನು ದಿನಾಂಕಃ09.03.2020 ರಿಂದ ದಿನಾಂಕಃ 16.09.2021 ರ ವರೆಗೆ ಹಿರಿಯೂರು ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ವೃತ್ತ ನಿರೀಕ್ಷಕನಾಗಿ ಕೆಲಸ ನಿರ್ವಹಿಸಿರುತ್ತೇನೆ.

ದಿನಾಂಕಃ10.03.2019 ರಂದು ಈ ಪ್ರಕರಣದ ಕಡತವನ್ನು ಚಾಸಾ.34 ರವರಿಂದ ಪಡೆದುಕೊಂಡಿರುತ್ತೇನೆ. ದಿಃ15.03.2020 ರಂದು ಈ ಪ್ರಕರಣದ ಸಾಕ್ಷಿದಾರರಾದ ಚಾಸಾ.2 ಮತ್ತು 3 ರವರ ಹೇಳಿಕೆಗಳನ್ನು ಪಡೆದಿರುತ್ತೇನೆ.

ದಿಃ18.01.2021 ರಂದು ಬೆಂಗಳೂರು ಕೊಲಂಬಿಯ ಏಷ್ಯಾ ಆಸ್ಪತ್ರೆಯಿಂದ ಚಾಸಾ.2 ಮತ್ತು 3 ರವರ ಗಾಯಾದ ಪ್ರಮಾಣ ಪತ್ರಗಳನ್ನು ಪಡೆದಿರುತ್ತೇನೆ ಗಾಯದ ಪ್ರಮಾಣ ಪತ್ರಗಳನ್ನು ನಿಪಿ-16 ಮತ್ತು 17 ಎಂದು ಸಹಿಗಳನ್ನು ನಿಪಿ-16(ಎ) ಮತ್ತು 17(ಎ) ಎಂದು ಗುರುತಿಸಲಾಯಿತು. ದಿಃ18.02.2021 ರಂದು ಹಿರಿಯೂರು ಸರ್ಕಾರಿ ಆಸ್ಪತ್ರೆಯಿಂದ ಆರೋಪಿ ಪ್ರಕಾಶ್ ನ ಗಾಯದ ಪ್ರಮಾಣ ಪತ್ರ ಪಡೆದಿರುತ್ತೇನೆ ಸದರಿ ಗಾಯದ ಪ್ರಮಾಣ ಪತ್ರವನ್ನು ನಿಪಿ-18 ಎಂದು ಸಹಿಯನ್ನು ನಿಪಿ-18(ಎ) ಎಂದು ಗುರುತಿಸಲಾಯಿತು.

ನಂತರ ತನಿಖೆ ಪೂರ್ಣ ಗೊಳಿಸಿ ಆರೋಪಿ ವಿರುದ್ಧ ದೋಷಾರೋಪಣಾ ಪಟ್ಟಿ ಸಲ್ಲಿಸಿರುತ್ತೇನೆ.

**ಪಾಟೀ–ಸವಾಲುಃ ಆರೋಪಿ ಪರ ಶ್ರೀ ಎಸ್ ಟಿ ವಕೀಲರಿಂದಃ–**

ದಿನಾಂಕಃ10.03.2019 ರಂದು ಈ ಪ್ರಕರಣದ ಕಡತವನ್ನು ಚಾಸಾ.34 ರವರಿಂದ ಪಡೆದುಕೊಂಡಿಲ್ಲ ಎಂದರೆ ಸರಿಯಲ್ಲ. ದಿಃ15.03.2020 ರಂದು ಈ ಪ್ರಕರಣದ ಸಾಕ್ಷಿದಾರರಾದ ಚಾಸಾ.2 ಮತ್ತು 3 ರವರ ಹೇಳಿಕೆಗಳನ್ನು ಪಡೆದಿಲ್ಲ ಎಂದರೆ ಸರಿಯಲ್ಲ.

ದಿಃ18.01.2021 ರಂದು ಬೆಂಗಳೂರು ಕೊಲಂಬಿಯ ಏಷ್ಯಾ ಆಸ್ಪತ್ರೆಯಿಂದ ಚಾಸಾ.2 ಮತ್ತು 3 ರವರ ಗಾಯಾದ ಪ್ರಮಾಣ ಪತ್ರಗಳನ್ನು ಪಡೆದಿಲ್ಲ ಎಂದರೆ ಸರಿಯಲ್ಲ ದಿಃ18.02.2021 ರಂದು ಹಿರಿಯೂರು ಸರ್ಕಾರಿ ಆಸ್ಪತ್ರೆಯಿಂದ ಆರೋಪಿ ಪ್ರಕಾಶ್ ನ ಗಾಯದ ಪ್ರಮಾಣ ಪತ್ರ ಪಡೆದಿಲ್ಲ ಎಂದರೆ ಸರಿಯಲ್ಲ. ತನಿಖೆ ಪೂರ್ಣ ಗೊಳಿಸಿ ಆರೋಪಿ ವಿರುದ್ಧ ದೋಷಾರೋಪಣಾ ಪಟ್ಟಿ ಸಲ್ಲಿಸಿಲ್ಲ ಎಂದರೆ ಸರಿಯಲ್ಲ. ಆರೋಪಿ ಯಾವುದೇ ತಪ್ಪು ಮಾಡದಿದ್ದರೂ ಆತನ ವಿರುದ್ಧ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇರುವುದಿಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಮುಕ್ತ ಹೇಳಿಕೆ ಮತ್ತು ನನ್ನ ಉಕ್ತಲೇಖನಕ್ಕೆ ತಕ್ಕಂತೆ ಬೆರಳಚ್ಚು ಮಾಡಿಸಲಾಯಿತು).

ಓ ಹೇ ಕೇ ಸರಿ ಇದೆ

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ., ಹಿರಿಯೂರು.